**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾದಂ. ರವರ ನ್ಯಾಯಾಲಯ, ನಂಜನಗೂಡು**

**ಸಿಸಿ ಸಂಖ್ಯೆ: 8723/2022**

**ಫಿರ್ಯಾದುದಾರರು** : ಸರ್ಕಾರದ ಪರವಾಗಿ ಆರಕ್ಷಕ ಉಪ–ನಿರೀಕ್ಷಕರು,
ನಂಜನಗೂಡು ಗ್ರಾಮಾಂತರ ಪೊಲೀಸ್ ಠಾಣೆ,
ನಂಜನಗೂಡು.

ವಿರುದ್ಧ

**ಆರೋಪಿಗಳು** : ಶ್ರೀ.ಶಿವಪ್ಪ ಮತ್ತು ಇತರರು

:: ದೋಷಾರೋಪಣೆ ::

**ಶ್ರೀ ಸತೀಶ ಕೆ.ಜಿ., ಬಿ.ಎ., ಎಲ್.ಎಲ್.ಬಿ.,** ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾದಂ. ನಂಜನಗೂಡು ಆದ ನಾನು ಆರೋಪಿತರಾದ–

1) ಶ್ರೀ.ಶಿವಪ್ಪ ಬಿನ್ ಗಂಗಾಧರಯ್ಯ
ವಯಸ್ಸು ಸುಮಾರು 40 ವರ್ಷ,

2) ಶ್ರೀಮತಿ.ರತ್ನಮ್ಮ ಕೋಂ ಶಿವಪ್ಪ
ವಯಸ್ಸು ಸುಮಾರು 36 ವರ್ಷ,

ನಂಜನಗೂಡು ತಾಲ್ಲೂಕಿನ ಗೊದ್ದನಪುರ ಗ್ರಾಮದ ನಿವಾಸಿಗಳಾದ ನಿಮ್ಮ ಮೇಲೆ ಮಾಡುವ ದೋಷಾರೋಪಣೆ ಏನೆಂದರೆ:–

ಮೊದಲನೆಯದಾಗಿ, ದಿನಾಂಕ 26.05.2022 ರಂದು ಬೆಳಿಗ್ಗೆ 09.00 ಗಂಟೆ ಸಮಯದಲ್ಲಿ ನಂಜನಗೂಡು ಗ್ರಾಮಾಂತರ ಪೊಲೀಸ್ ಠಾಣಾ ವ್ಯಾಪ್ತಿಗೆ ಸೇರಿದ ಗೊದ್ದನಪುರ ಗ್ರಾಮದಲ್ಲಿರುವ ಶ್ರೀ.ಕುಮಾರ ಎಂಬುವವರ ಮನೆಯ ಮುಂಭಾಗದ ಸಾರ್ವಜನಿಕ ರಸ್ತೆಯಲ್ಲಿ ಆರೋಪಿಗಳಾದ ನೀವು ಸಮಾನ ಉದ್ದೇಶದಿಂದ ಚಾಸಾ–1– ಶ್ರೀ.ಶಿವಕುಮಾರರವರ ಜೊತೆ ಜಗಳ ತೆಗೆದು, ಆರೋಪಿಗಳ ಪೈಕಿ 1 ನೇ ಆರೋಪಿಯಾದ ನೀವು ಚಾಸಾ–1 ರವರನ್ನು ತಬ್ಬಿ ಹಿಡಿದುಕೊಂಡು ಒಂದು ಎಲ್ಲೆಯಿಂದಾಚೆಗೆ ಮುಂದೆ ಹೋಗದಂತೆ ಅಕ್ರಮವಾಗಿ ಪ್ರತಿಬಂಧಿಸಿದ್ದು, ಆ ಮೂಲಕ ಭಾರತೀಯ ದಂಡ ಸಂಹಿತೆ ಕಲಂ 341 ಸಹವಾಚಕ 34 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಎಸಗಿರುವಿರಿ.

ಎರಡನೆಯದಾಗಿ, ಮೇಲೆ ಹೇಳಿದ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ,

ಆರೋಪಿಗಳಾದ ನೀವು ಸಮಾನ ಉದ್ದೇಶದಿಂದ ಚಾಸಾ–1 ರವರ ಜೊತೆ ಜಗಳ ತೆಗೆದು, ಆರೋಪಿಗಳ ಪೈಕಿ 1 ನೇ ಆರೋಪಿಯಾದ ನೀವು ಚಾಸಾ–1 ರವರನ್ನು ತಳ್ಳಿ ಕೆಳಕ್ಕೆ ಬೀಳಿಸಿ ಚಾಸಾ–1 ರವರ ಎಡಭುಜಕ್ಕೆ ತರುಚಿದ ಗಾಯಗಳಾಗಿದ್ದು ಹಾಗು ಎಡತುಟಿಗೆ ನೋವುಂಟು ಮಾಡಿದ್ದು, ಆ ಮೂಲಕ ಭಾರತೀಯ ದಂಡ ಸಂಹಿತೆ ಕಲಂ 323 ಸಹವಾಚಕ 34 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಎಸಗಿರುವಿರಿ.

ಮೂರನೆಯದಾಗಿ, ಮೇಲೆ ಹೇಳಿದ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ, ಆರೋಪಿಗಳಾದ ನೀವು ಸಮಾನ ಉದ್ದೇಶದಿಂದ ಚಾಸಾ–1 ರವರ ಜೊತೆ ಜಗಳ ತೆಗೆದು, ಆರೋಪಿಗಳ ಪೈಕಿ 2 ನೇ ಆರೋಪಿಯಾದ ನೀವು ಮಾರಕಾಯುಧವಾದ ದೊಣ್ಣೆಯಿಂದ ಚಾಸಾ–1 ರವರ ಬಲಗಾಲಿಗೆ, ಬಲಭುಜಕ್ಕೆ ಸ್ವ-ಇಚ್ಛೆಯಿಂದ ಹಲ್ಲೆ ಮಾಡಿ ಸಾಮಾನ್ಯ ಸ್ವರೂಪದ ಗಾಯವನ್ನುಂಟು ಮಾಡಿದ್ದು, ಆ ಮೂಲಕ ಭಾರತೀಯ ದಂಡ ಸಂಹಿತೆ ಕಲಂ 324 ಸಹವಾಚಕ 34 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಎಸಗಿರುವಿರಿ.

ಪ್ರಶ್ನೆ:1– ಈ ಮೇಲೆ ಹೇಳಿದಂತೆ ನಿಮಗೆ ಓದಿ ಹೇಳಿ ವಿವರಿಸಿದ ದೋಷಾರೋಪಣೆಯನ್ನು ಅರ್ಥಮಾಡಿಕೊಂಡಿರುವಿರಾ?

1 ಮತ್ತು 2 ನೇ ಆರೋಪಿಗಳ ಉತ್ತರಃ

ಪ್ರಶ್ನೆ:2– ಸದರಿ ಆರೋಪಣೆಗಳನ್ನು ಒಪ್ಪಿಕೊಳ್ಳುವಿರಾ ಅಥವಾ ವಿಚಾರಣೆಯಾಗಬೇಕೋ?

1 ಮತ್ತು 2 ನೇ ಆರೋಪಿಗಳ ಉತ್ತರಃ

(ಆರೋಪಿಗಳಿಗೆ ತಿಳಿದಿರುವ ಕನ್ನಡ ಭಾಷೆಯಲ್ಲಿ ಈ ಆಪಾದನೆಯನ್ನು ಓದಿ ತಿಳಿಸಿ ಹೇಳಲಾಗಿ ಸದರಿ ಆರೋಪಿಗಳು ಹೇಳಿದ ಉತ್ತರಗಳನ್ನು ಯಥಾವತ್ತಾಗಿ ಬರೆದುಕೊಳ್ಳಲಾಯಿತ್ತೆಂದು ದೃಢೀಕರಿಸಿರುತ್ತೇನೆ.)

ದಿನಾಂಕಃ 30.07.2025

(ಸತೀಶ. ಕೆ.ಜಿ.)
ಪ್ರಧಾನ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರ.ದ.ನ್ಯಾದಂ. ನಂಜನಗೂಡು.